ಇಲಾಖೆ / ವಿಷಯ: DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ ದಿನಾಂಕ : DATE : 6/9/2018

# ಅಧಿಕಾರಿಗಳ ವಿದೇಶ ಪ್ರವಾಸಕ್ಕೆ ಕಡಿವಾಣ

ಬೆಂಗಳೂರು: ರಾಜ್ಯ ಸರ್ಕಾರಿ ಅಧಿಕಾರಿಗಳ ವಿದೇಶ ಪ್ರವಾಸಕ್ಕೆ ಕಡಿವಾಣ ಹಾಕಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಡಿಪಿಎಆರ್) ಹೊಸ ಮಾರ್ಗಸೂಚಿ ಹೊರಡಿಸಿದೆ.

ಇತ್ತೀಚಿನ ದಿನಗಳಲ್ಲಿ ಅಧಿಕಾರಿಗಳ ವಿದೇಶ ಪ್ರವಾಸ ಪ್ರವೃತ್ತಿ ಹೆಚ್ಚುತ್ತಿದೆ. ನಿರ್ದಿಷ್ಟ ಕಾರಣಗಳನ್ನು ನೀಡದೆ ಈ ಬಗ್ಗೆ ಪ್ರಸ್ತಾವ ಸಲ್ಲಿಸುತ್ತಿರುವುದು ಮಾರ್ಗಸೂಚಿ ಪರಿಷ್ಕರಿಸಲು ಕಾರಣವಾಗಿದೆ.

ಹೊಸ ಮಾರ್ಗಸೂಚಿ ಪ್ರಕಾರ, ಸಚಿವರ ನೇತೃತ್ವದ ಅಧಿಕಾರಿಗಳ ನಿಯೋಗ ಹಾಗೂ ಅಧಿಕಾರಿಗಳ ಪ್ರವಾಸದ ಪ್ರಸ್ತಾವವನ್ನು ನೇರವಾಗಿ ಮುಖ್ಯಮಂತ್ರಿ ಅವರ ಅನುಮೋದನೆಗೆ ಕಳುಹಿಸಬಾರದು. ಸಂಬಂಧಿಸಿದ ಸಚಿವರ ಅನುಮೋದನೆ ಪಡೆದು ಡಿಪಿಎಆರ್‌ಗೆ ಕಳುಹಿಸಬೇಕು.

ಕೇಂದ್ರ ಸೇವೆಯಲ್ಲಿರುವ ಅಧಿಕಾರಿಗಳ ಜೊತೆಗೆ ಪ್ರವಾಸಕ್ಕೆ ತೆರಳಲು ಕೇಂದ್ರ ಸರ್ಕಾರದ ವಿದೇಶಾಂಗ ಸಚಿವಾಲಯದಿಂದ ಅನುಮೋದನೆ ಪಡೆಯಬೇಕು. ಪ್ರವಾಸದ ವೇಳೆ ಸಾರಿಗೆ, ವಸತಿ ವೆಚ್ಚ ಹಾಗೂ ಇತರ ವಿದೇಶಿ ಆತಿಥ್ಯಗಳನ್ನು ಸ್ವೀಕರಿಸುವ ಪ್ರಸ್ತಾವನೆ ಇದ್ದಲ್ಲಿ, ಕೇಂದ್ರ ಗೃಹ ಸಚಿವಾಲಯದ ಅನುಮೋದನೆ ಪಡೆಯಬೇಕು. ಈ ಪ್ರಕ್ರಿಯೆ ಪೂರ್ಣಗೊಳಿಸಲು ಕನಿಷ್ಠ ಮೂರು ವಾರಗಳ ಕಾಲಾವಕಾಶ ಬೇಕಾಗುವುದರಿಂದ ಮುಂಚಿತವಾಗಿ ಪ್ರಸ್ತಾವ ಸಲ್ಲಿಸಬೇಕು ಎಂದು ಇಲಾಖೆ ಕಾರ್ಯದರ್ಶಿ ಅಂಜುಂ ಪರ್ವೇಜ್ ತಿಳಿಸಿದ್ದಾರೆ.